# All India Radio: Bangalore
# National Bulletin In Kannada
**01.07.2026  7.35 am**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**01.07.2026  7.35 am**

**<>><><*><><<>**

ಮುಖ್ಯಾಂಶಗಳು

**೧. ಇರಾನ್ ಅಧ್ಯಕ್ಷರೊಂದಿಗೆ ಮಹತ್ವದ ದೂರವಾಣಿ ಸಂಭಾಷಣೆ ನಡೆಸಿದ ಪ್ರಧಾನಿ ನರೇಂದ್ರ ಮೋದಿ**

**೨. ಪಶ್ಚಿಮ ಏಷ್ಯಾ ಸಂಘರ್ಷ ಹಿನ್ನೆಲೆ; ಇದೇ ೧೫ ರವರೆಗೆ ನಿರ್ಣಾಯಕ ಪೆಟ್ರೋಕೆಮಿಕಲ್ ಉತ್ಪನ್ನಗಳ ಮೇಲಿನ ಸಂಪೂರ್ಣ ಕಸ್ಟಮ್ಸ್ ಸುಂಕ ವಿನಾಯಿತಿ ವಿಸ್ತರಿಸಿದ ಕೇಂದ್ರ ಸರ್ಕಾರ**

**೩. ಇಂದಿನಿಂದ ಗ್ರಾಮೀಣ ಭಾರತದಾದ್ಯಂತ ವಿಬಿ-ಜಿ ರಾಮ್ ಜಿ ಕಾಯ್ದೆ -೨೦೨೫ ಜಾರಿ**

**೪. ಭಾರತಕ್ಕೆ ಇಂದಿನಿಂದ ಮೂರು ದಿನ ಜಪಾನ್ ಪ್ರಧಾನಿ ಭೇಟಿ; ಭಾರತ-ಜಪಾನ್ ವಾರ್ಷಿಕ ಶೃಂಗಸಭೆಯಲ್ಲಿ ಭಾಗಿ**

**೫. ಪೀಫಾ ವಿಶ್ವಕಪ್ ಫುಟ್ಬಾಲ್; ಸ್ವೀಡನ್ ತಂಡವನ್ನು ೩-೦ ಗೋಲುಗಳಿಂದ ಮಣಿಸಿದ ಫ್ರಾನ್ಸ್**

**<>><><*><><<>**

ಪ್ರಧಾನಿ ನರೇಂದ್ರ ಮೋದಿ ಅವರು ನಿನ್ನೆ ಇರಾನ್ ಅಧ್ಯಕ್ಷ ಡಾ.ಮಸೌದ್ ಪೆಜೆಶ್ಕಿಯಾನ್ ಅವರೊಂದಿಗೆ ದೂರವಾಣಿ ಸಂಭಾಷಣೆ ನಡೆಸಿದರು. ಮಾತುಕತೆಯ ಸಮಯದಲ್ಲಿ, ಅಧ್ಯಕ್ಷ ಪೆಜೆಶ್ಕಿಯಾನ್ ಅವರು ಪಶ್ಚಿಮ ಏಷ್ಯಾದಲ್ಲಿನ ಇತ್ತೀಚಿನ ಬೆಳವಣಿಗೆಗಳು ಮತ್ತು ಮುಂದಿನ ಮಾರ್ಗದ ಬಗ್ಗೆ ಪ್ರಧಾನಿ ನರೇಂದ್ರ ಮೋದಿ ಅವರಿಗೆ ವಿವರಿಸಿದರು.  ಪ್ರಧಾನಿಯವರು, ಈ ತಿಳುವಳಿಕೆಯನ್ನು ಸ್ವಾಗತಿಸಿದರು ಮತ್ತು ಎಲ್ಲಾ ಸಮಸ್ಯೆಗಳನ್ನು ಸಂವಾದ ಮತ್ತು ರಾಜತಾಂತ್ರಿಕತೆಯ ಮೂಲಕ ಪರಿಹರಿಸಬೇಕು ಎಂಬ ಭಾರತದ ಸ್ಥಿರ ನಿಲುವನ್ನು ಪುನರುಚ್ಚರಿಸಿದರು. ಈ ಪ್ರದೇಶದಲ್ಲಿ ಶಾಶ್ವತ ಶಾಂತಿ ಮತ್ತು ಸ್ಥಿರತೆಯನ್ನು ಖಚಿತಪಡಿಸಿಕೊಳ್ಳಲು ಮತ್ತು ವಾಣಿಜ್ಯ ವಹಿವಾಟುಗಳ ಸ್ವಾತಂತ್ರ್ಯವನ್ನು ರಕ್ಷಿಸಲು ನಿರಂತರ ಪ್ರಯತ್ನಗಳ ಅಗತ್ಯವನ್ನು ಅವರು ಪುನರುಚ್ಚರಿಸಿದರು. ಇರಾನ್ ಅಧ್ಯಕ್ಷರು ಸಂಭಾಷಣೆಯ ಸಮಯದಲ್ಲಿ ಶಾಂತಿ, ಸ್ಥಿರತೆ ಮತ್ತು ಪ್ರಾದೇಶಿಕ ಸಹಕಾರವನ್ನು ಬೆಂಬಲಿಸುವಲ್ಲಿ ಪ್ರಧಾನಿ ನರೇಂದ್ರ ಸಮೋದಿಯವರ ವೈಯಕ್ತಿಕ ಪಾತ್ರವನ್ನು ಶ್ಲಾಘಿಸಿದರು.  ಭಾರತದಲ್ಲಿನ ಇರಾನ್ ರಾಯಭಾರ ಕಚೇರಿಯ ಪ್ರಕಾರ, ಸಂಭಾಷಣೆಯ ಸಮಯದಲ್ಲಿ, ಅಧ್ಯಕ್ಷ ಪೆಜೆಶ್ಕಿಯಾನ್ ಭಾರತದಲ್ಲಿ ಬ್ರಿಕ್ಸ್ ಇಂಧನ ಸಚಿವರ ಸಭೆಯ ಯಶಸ್ವಿ ಯೋಜನೆ ಮತ್ತು ಆತಿಥ್ಯದ ಬಗ್ಗೆ ತೃಪ್ತಿ ವ್ಯಕ್ತಪಡಿಸಿದರು. ಬ್ರಿಕ್ಸ್‌ನಂತಹ ಬಹುಪಕ್ಷೀಯ ಚೌಕಟ್ಟುಗಳೊಳಗೆ ಇರಾನ್ ಮತ್ತು ಭಾರತದ ನಡುವಿನ ಸಹಕಾರ ವಿಸ್ತರಿಸುತ್ತಲೇ ಇರುತ್ತದೆ ಎಂದು ಅವರು ಆಶಿಸಿದರು.  ಭಾರತದೊಂದಿಗಿನ ಸಂಬಂಧಗಳನ್ನು ಬಲಪಡಿಸುವ ಮತ್ತು ಗಾಢಗೊಳಿಸುವ ಇರಾನ್‌ನ ಬದ್ಧತೆಯನ್ನು ಒತ್ತಿ ಹೇಳಿದ ಇರಾನ್ ಅಧ್ಯಕ್ಷರು, ಎರಡೂ ದೇಶಗಳ ನಡುವಿನ ಸಂಬಂಧಗಳು ದೀರ್ಘಕಾಲದ ಐತಿಹಾಸಿಕ ಪರಂಪರೆ ಮತ್ತು ಪರಸ್ಪರ ಗೌರವದ ಮೇಲೆ ಸ್ಥಾಪಿತವಾಗಿವೆ ಎಂದು ಹೇಳಿದರು.

<>><><*><><<>

ಪಶ್ಚಿಮ ಏಷ್ಯಾದಲ್ಲಿ ನಡೆಯುತ್ತಿರುವ ಸಂಘರ್ಷದ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರ, ಇದೇ ೧೫ ರವರೆಗೆ ನಿರ್ಣಾಯಕ ಪೆಟ್ರೋಕೆಮಿಕಲ್ ಉತ್ಪನ್ನಗಳ ಮೇಲಿನ ಸಂಪೂರ್ಣ ಕಸ್ಟಮ್ಸ್ ಸುಂಕ ವಿನಾಯಿತಿಯನ್ನು ವಿಸ್ತರಿಸಿದೆ.  ಜಾಗತಿಕ ಪೂರೈಕೆ ಸರಪಳಿಗಳಲ್ಲಿನ ಪರಿಣಾಮವಾಗಿ ಉಂಟಾದ ಅಡೆತಡೆಗಳಿಂದಾಗಿ ತಾತ್ಕಾಲಿಕ ಮತ್ತು ಉದ್ದೇಶಿತ ಪರಿಹಾರವಾಗಿ ಕೇಂದ್ರವು ನಿನ್ನೆಯವರೆಗೆ ಸಂಪೂರ್ಣ ಕಸ್ಟಮ್ಸ್ ಸುಂಕ ವಿನಾಯಿತಿಯನ್ನು ನೀಡಿತ್ತು. ಈ ಅವಧಿಯಲ್ಲಿ ಭಾರತೀಯ ಪೆಟ್ರೋಲಿಯಂ ಕಂಪನಿಗಳು ಎಲ್‌ಪಿಜಿ ಉತ್ಪಾದನೆಯತ್ತ ಗಮನಹರಿಸಲು ಕೇಳಲಾಗಿರುವುದರಿಂದ ದೇಶೀಯ ಮಾರುಕಟ್ಟೆಯಲ್ಲಿ ಪೆಟ್ರೋಕೆಮಿಕಲ್‌ಗಳ ಸಾಕಷ್ಟು ಲಭ್ಯತೆಯನ್ನು ಖಚಿತಪಡಿಸಿಕೊಳ್ಳಲು ಈ ವಿನಾಯಿತಿಯನ್ನು ನೀಡಲಾಗಿದೆ. ಭಾರತದ ಉತ್ಪಾದನಾ ವಲಯವನ್ನು ಬೆಂಬಲಿಸಲು ಸರ್ಕಾರ ಬದ್ಧವಾಗಿದೆ. ಪ್ಲಾಸ್ಟಿಕ್‌ಗಳು, ಪ್ಯಾಕೇಜಿಂಗ್, ಜವಳಿ, ಔಷಧಗಳು, ರಾಸಾಯನಿಕಗಳು, ಆಟೋಮೋಟಿವ್ ಘಟಕಗಳು ಮತ್ತು ಇತರ ಉತ್ಪಾದನಾ ವಿಭಾಗಗಳು ಸೇರಿದಂತೆ ಪೆಟ್ರೋಕೆಮಿಕಲ್ ಫೀಡ್‌ಸ್ಟಾಕ್ ಮತ್ತು ಮಧ್ಯಂತರಗಳನ್ನು ಅವಲಂಬಿಸಿರುವ ವ್ಯಾಪಕ ಶ್ರೇಣಿಯ ವಲಯಗಳಿಗೆ ವಿನಾಯಿತಿ ಪ್ರಯೋಜನವನ್ನು ನೀಡುತ್ತದೆ ಎಂದು ನಿರೀಕ್ಷಿಸಲಾಗಿದೆ.

<>><><*><><<>

ವಿಕಸಿತ ಭಾರತ - ರೋಜ್‌ಗಾರ್ ಮತ್ತು ಅಜೀವಿಕಾ ಮಿಷನ್‌ಗಾಗಿ ಗ್ಯಾರಂಟಿ ಕಾಯ್ದೆ, ೨೦೨೫ ಇಂದಿನಿಂದ ಜಾರಿಗೆ ಬರಲಿದೆ. ಪ್ರತಿ ಹಣಕಾಸು ವರ್ಷದಲ್ಲಿ ೧೨೫ ದಿನಗಳ ಕೂಲಿ ಉದ್ಯೋಗವನ್ನು ಖಾತರಿಪಡಿಸುವ ಈ ಕಾಯ್ದೆಯು ಗ್ರಾಮೀಣ ಭಾರತವನ್ನು ಸಬಲೀಕರಣಗೊಳಿಸುತ್ತದೆ ಎಂದು ಗ್ರಾಮೀಣಾಭಿವೃದ್ಧಿ ಸಚಿವಾಲಯ ತಿಳಿಸಿದೆ. ದೇಶಾದ್ಯಂತ ಹೊಸ ಚೌಕಟ್ಟಿನ ಕಾರ್ಯಾಚರಣೆಗಾಗಿ ಪ್ರಸ್ತುತ ಹಣಕಾಸು ವರ್ಷದಲ್ಲಿ ೯೫ ಸಾವಿರ ೬೯೨ ಕೋಟಿ ರೂಪಾಯಿಗಳ ನಿಬಂಧನೆಯನ್ನು ಮಾಡಲಾಗಿದೆ . ವಿಬಿ-ಜಿ ರಾಮ್ ಜಿ ಕಾಯ್ದೆಯು ಇಪ್ಪತ್ತು ವರ್ಷ ಹಳೆಯದಾದ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಕಾಯ್ದೆ ೨೦೦೫ ಅನ್ನು ಬದಲಾಯಿಸುತ್ತದೆ. ಹೊಸ ಕಾಯ್ದೆಯು ಶಾಸನಬದ್ಧ ಉದ್ಯೋಗ ಖಾತರಿಯನ್ನು ಹಣಕಾಸು ವರ್ಷದಲ್ಲಿ ನೂರು ದಿನಗಳಿಂದ ನೂರ ಇಪ್ಪತ್ತೈದು ದಿನಗಳಿಗೆ ಹೆಚ್ಚಿಸುವ ಗುರಿಯನ್ನು ಹೊಂದಿದೆ. ಈ ವರ್ಧಿತ ಉದ್ಯೋಗ ಖಾತರಿಯು ಗ್ರಾಮೀಣ ಅಭಿವೃದ್ಧಿಯ ವೇಗವನ್ನು ಬೆಂಬಲಿಸಲು, ಹೆಚ್ಚಿನ ಆದಾಯ ಭದ್ರತೆಯನ್ನು ಒದಗಿಸಲು ಮತ್ತು ಗ್ರಾಮೀಣ ಕುಟುಂಬಗಳನ್ನು ಸಬಲೀಕರಣಗೊಳಿಸಲು ಉದ್ದೇಶಿಸಲಾಗಿದೆ. ಈ ಕಾಯಿದೆಯು ಸಕಾಲಿಕ, ಪಾರದರ್ಶಕ ಮತ್ತು ಜವಾಬ್ದಾರಿಯುತ ವೇತನ ಪಾವತಿಗಳಿಗೆ ಬಲವಾದ ಒತ್ತು ನೀಡುತ್ತದೆ. ಹೊಸ ಕಾಯಿದೆಯು ನಿಗದಿತ ಸಮಯದೊಳಗೆ ಕೆಲಸ ಒದಗಿಸದಿದ್ದರೆ ನಿರುದ್ಯೋಗ ಭತ್ಯೆಯನ್ನು ಸಹ ಒದಗಿಸುತ್ತದೆ.  ವಿಕಸಿತ ಭಾರತ ಜಿ ರಾಮ್ ಜಿ ಅನುಷ್ಠಾನದ ಕುರಿತು, ಕೇಂದ್ರ ಗ್ರಾಮೀಣಾಭಿವೃದ್ಧಿ ಸಚಿವ ಶಿವರಾಜ್ ಸಿಂಗ್ ಚೌಹಾಣ್, ಯಾವುದೇ ಅರ್ಹ ಗ್ರಾಮೀಣ ಕಾರ್ಮಿಕನು ಒಂದು ದಿನವೂ ಕೆಲಸವಿಲ್ಲದೆ ಇರಬಾರದು ಎಂದು ಹೇಳಿದ್ದಾರೆ. ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳೊಂದಿಗೆ ನಿಕಟ ಸಮನ್ವಯದೊಂದಿಗೆ, ಹೊಸ ಚೌಕಟ್ಟಿಗೆ ಸುಗಮ ಪರಿವರ್ತನೆಯನ್ನು ಖಚಿತಪಡಿಸಿಕೊಳ್ಳಲು ಸರ್ಕಾರವು ಎಲ್ಲಾ ಆಡಳಿತಾತ್ಮಕ, ಹಣಕಾಸು ಮತ್ತು ತಾಂತ್ರಿಕ ಸಿದ್ಧತೆಗಳನ್ನು ಪೂರ್ಣಗೊಳಿಸಿದೆ ಎಂದು ಅವರು ತಿಳಿಸಿದ್ದಾರೆ. ಸಾಕಷ್ಟು ಹಣಕಾಸು ಸಂಪನ್ಮೂಲಗಳನ್ನು ಲಭ್ಯವಾಗುವಂತೆ ಮಾಡಲಾಗಿದೆ, ಅನುಷ್ಠಾನ ವ್ಯವಸ್ಥೆಗಳು ಸಂಪೂರ್ಣವಾಗಿ ಜಾರಿಯಲ್ಲಿವೆ ಮತ್ತು ಪ್ರಗತಿಯಲ್ಲಿರುವ ಕೆಲಸಗಳು ಯಾವುದೇ ಅಡೆತಡೆಯಿಲ್ಲದೆ ಮುಂದುವರಿಯುತ್ತವೆ. ೧೨೫ ದಿನಗಳ ವೇತನ ಉದ್ಯೋಗದ ವರ್ಧಿತ ಖಾತರಿಯು

ಗ್ರಾಮೀಣ ಜೀವನೋಪಾಯವನ್ನು ಬಲಪಡಿಸುತ್ತದೆ ಮತ್ತು ವಿಕಸಿತ ಭಾರತದ ದೃಷ್ಟಿಕೋನವನ್ನು ವೇಗಗೊಳಿಸುತ್ತದೆ ಎಂದು ಅವರು ಹೇಳಿದ್ದಾರೆ.

**<><><*><><<>**

ಜಪಾನ್ ಪ್ರಧಾನಿ ಸನೇ ತಕೈಚಿ ಅವರು, ಮೂರು ದಿನಗಳ ಭಾರತ ಭೇಟಿಗಾಗಿ ಇಂದು ಸಂಜೆ ನವದೆಹಲಿಗೆ ಆಗಮಿಸಲಿದ್ದಾರೆ. ಅವರು, ಪ್ರಮುಖವಾಗಿ ೧೬ನೇ ಭಾರತ-ಜಪಾನ್ ವಾರ್ಷಿಕ ಶೃಂಗಸಭೆಯಲ್ಲಿ ಭಾಗವಹಿಸಲಿದ್ದಾರೆ. ಈ ಶೃಂಗಸಭೆಯು ಉಭಯ ದೇಶಗಳಿಗೆ ದ್ವಿಪಕ್ಷೀಯ ಸಹಕಾರವನ್ನು ಬಲಪಡಿಸಲು ಹಾಗೂ ಪರಸ್ಪರ ಆಸಕ್ತಿಯ ಪ್ರಾದೇಶಿಕ ಮತ್ತು ಜಾಗತಿಕ ವಿಷಯಗಳ ಕುರಿತು ಅಭಿಪ್ರಾಯ ವಿನಿಮಯ ಮಾಡಿಕೊಳ್ಳಲು ಅವಕಾಶ ಒದಗಿಸುತ್ತದೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ. ಭೇಟಿಯ ಸಮಯದಲ್ಲಿ ಅವರು, ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ಮಾತುಕತೆ ನಡೆಸಲಿದ್ದಾರೆ. ಇದು ಜಪಾನ್ ಪ್ರಧಾನಿ ಸನೇ ತಕೈಚಿ ಅವರ ಮೊದಲ ಅಧಿಕೃತ ಭಾರತ ಭೇಟಿಯಾಗಿದೆ. ಇದು ಭಾರತ-ಜಪಾನ್ ವಿಶೇಷ ಕಾರ್ಯತಂತ್ರ ಮತ್ತು ಜಾಗತಿಕ ಪಾಲುದಾರಿಕೆಯನ್ನು ಮತ್ತಷ್ಟು ಬಲಪಡಿಸಲು ಎರಡೂ ದೇಶಗಳ ಹಂಚಿಕೆಯ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ ಎಂದು ವಿದೇಶಾಂಗ ಸಚಿವಾಲಯ ಹೇಳಿದೆ.

**<><><*><><<>**

ಜಮ್ಮು ಮತ್ತು ಕಾಶ್ಮೀರದಲ್ಲಿ ವಾರ್ಷಿಕ ಅಮರನಾಥ ಯಾತ್ರೆಗೆ ಹೆಚ್ಚಿನ ಭದ್ರತೆ ಕಲ್ಪಿಸಲಾಗಿದೆ. ಸುಮಾರು ೫೫ ಸಾವಿರ ಯಾತ್ರಾರ್ಥಿಗಳಿಗೆ ವಸತಿ ಸೇರಿದಂತೆ ಎಲ್ಲಾ ಅಗತ್ಯ ವ್ಯವಸ್ಥೆಗಳನ್ನು ಮಾಡಲಾಗಿದೆ. ನಾಳೆಯಿಂದ ಜಮ್ಮುವಿನ ಭಗವತಿ ನಗರ ಮೂಲ ಶಿಬಿರದಿಂದ ಭಕ್ತರ ಮೊದಲ ತಂಡ ಹೊರಡಲಿದೆ. ಅಮರನಾಥ ದೇಗುಲ ಮಂಡಳಿಯ ಅಧ್ಯಕ್ಷರೂ ಆಗಿರುವ ಲೆಫ್ಟಿನೆಂಟ್ ಗವರ್ನರ್ ಮನೋಜ್ ಸಿನ್ಹಾ ಅವರು ಬೆಳಿಗ್ಗೆ ೪ ಗಂಟೆಗೆ ಮೊದಲ ಬೆಂಗಾವಲು ಪಡೆಯನ್ನು ಉದ್ಘಾಟಿಸಲಿದ್ದಾರೆ. ೫೭ ದಿನಗಳ ಯಾತ್ರೆಯು ಇದೇ ೩ ರಂದು ಅನಂತ್‌ನಾಗ್‌ನಲ್ಲಿರುವ ಸಾಂಪ್ರದಾಯಿಕ ನುನ್ವಾನ್-ಪಹಲ್ಗಾಮ್ ಮಾರ್ಗ ಮತ್ತು ಗಂಡೇರ್‌ಬಾಲ್ ಜಿಲ್ಲೆಯ ಬಾಲ್ಟಾಲ್ ಮಾರ್ಗದ ಮೂಲಕ ಪ್ರಾರಂಭವಾಗುತ್ತದೆ. ಯಾತ್ರಿಕರು ಜಮ್ಮು-ಶ್ರೀನಗರ ರಾಷ್ಟ್ರೀಯ ಹೆದ್ದಾರಿ ಮೂಲಕ ಮಾತ್ರ ಪ್ರಯಾಣಿಸಬೇಕು ಮತ್ತು ಮೊಘಲ್ ರಸ್ತೆ ಮತ್ತು ಧಾರ್ ರಸ್ತೆಯಂತಹ ಪರ್ಯಾಯ ಮಾರ್ಗಗಳಲ್ಲಿ ಯಾತ್ರಾ ಸಂಚಾರಕ್ಕೆ ಅವಕಾಶವಿರುವುದಿಲ್ಲ. ಬೆಳಿಗ್ಗೆ ೬ ರಿಂದ ೮ ಗಂಟೆಯವರೆಗೆ ಲಖನ್‌ಪುರಕ್ಕೆ ಆಗಮಿಸುವ ಯಾತ್ರಾರ್ಥಿಗಳನ್ನು ಜಮ್ಮುವಿಗೆ ಕರೆದೊಯ್ಯಲಾಗುತ್ತದೆ.

**<><><*><><<>**

ಉತ್ತರ ಪ್ರದೇಶ ಸರ್ಕಾರವು ಸೇವೆಯಲ್ಲಿರುವ ಶಿಕ್ಷಕರಿಗೆ ಪ್ರತ್ಯೇಕ ಶಿಕ್ಷಕರ ಅರ್ಹತಾ ಪರೀಕ್ಷೆ- ಟಿಇಟಿ ನಡೆಸಲು ನಿರ್ಧರಿಸಿದೆ. UPTET -೨೦೨೬ ರ ಪರಿಶೀಲನಾ ಸಭೆಯಲ್ಲಿ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ. ಸಭೆಯಲ್ಲಿ, ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಈಗಾಗಲೇ ಸೇವೆಯಲ್ಲಿರುವ ಶಿಕ್ಷಕರಿಗೆ ಪ್ರತ್ಯೇಕ ಟಿಇಟಿ ನಡೆಸುವಂತೆ ಉತ್ತರ ಪ್ರದೇಶ ಶಿಕ್ಷಣ ಸೇವಾ ಆಯ್ಕೆ ಆಯೋಗಕ್ಕೆ ನಿರ್ದೇಶನ ನೀಡಿದರು. ಸುಪ್ರೀಂ ಕೋರ್ಟ್ ಪರೀಕ್ಷೆಯನ್ನು ಕಡ್ಡಾಯಗೊಳಿಸಿರುವುದರಿಂದ, ಸೇವೆಯಲ್ಲಿರುವ ಶಿಕ್ಷಕರಿಗೆ ಉದ್ಯೋಗ ಮತ್ತು ಬಡ್ತಿಗೆ ಸಮಾನ ಅವಕಾಶ ನೀಡಬೇಕು, ಅವಕಾಶದ ಕೊರತೆಯಿಂದಾಗಿ ಯಾವುದೇ ಶಿಕ್ಷಕರು ತೊಂದರೆಗಳನ್ನು ಎದುರಿಸುವುದಿಲ್ಲ ಎಂಬುದನ್ನು ಖಚಿತಪಡಿಸಿಕೊಳ್ಳಬೇಕು ಎಂದು ಅವರು ಹೇಳಿದ್ದಾರೆ. ಟಿಇಟಿ ಪರೀಕ್ಷೆಯು ಗುರುವಾರದಿಂದ ಜುಲೈ ೪ ರವರೆಗೆ

ರಾಜ್ಯದ ೬೦ ಜಿಲ್ಲೆಗಳ ೯೫೫ ಪರೀಕ್ಷಾ ಕೇಂದ್ರಗಳಲ್ಲಿ ನಡೆಯಲಿದೆ. ಸುಮಾರು ೨೦ ಲಕ್ಷ ಆಕಾಂಕ್ಷಿಗಳು ಪರೀಕ್ಷೆಯನ್ನು ತೆಗೆದುಕೊಳ್ಳುವ ನಿರೀಕ್ಷೆಯಿದೆ.

**<>><<*><><<>**

೨೯ನೇ ರಾಷ್ಟ್ರೀಯ ಇ-ಆಡಳಿತ ಸಮ್ಮೇಳನ ಇಂದು ಜೈಪುರದಲ್ಲಿ ಆರಂಭವಾಗಲಿದೆ. ಎರಡು ದಿನಗಳ ಈ ಸಮ್ಮೇಳನ, ರಾಜಸ್ಥಾನ ಅಂತಾರಾಷ್ಟ್ರೀಯ ಕೇಂದ್ರದಲ್ಲಿ ನಡೆಯಲಿದ್ದು, ಆಡಳಿತ ಸುಧಾರಣೆಗಳು ಮತ್ತು ಸಾರ್ವಜನಿಕ ಕುಂದುಕೊರತೆಗಳ ಇಲಾಖೆ, ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವಾಲಯ ಮತ್ತು ರಾಜಸ್ಥಾನ ಸರ್ಕಾರ ಜಂಟಿಯಾಗಿ ಆಯೋಜಿಸುತ್ತಿವೆ.

**<>><<*><><<>**

ನ್ಯೂಯಾರ್ಕ್‌ನ ನ್ಯೂಜೆರ್ಸಿ ಕ್ರೀಡಾಂಗಣದಲ್ಲಿ ಇಂದು ಬೆಳಿಗ್ಗೆ ನಡೆದ ೩೨ನೇ ಸುತ್ತಿನ ವಿಶ್ವಕಪ್ ಫುಟ್ಬಾಲ್ ಪಂದ್ಯದಲ್ಲಿ, ಫ್ರಾನ್ಸ್, ಸ್ವೀಡನ್ ತಂಡವನ್ನು ೩-೦ ಗೋಲುಗಳಿಂದ ಸೋಲಿಸಿ ೧೬ನೇ ಸುತ್ತಿಗೆ ಪ್ರವೇಶಿಸಿತು. ಎಂಬಪ್ಪೆ ಎರಡು ಗೋಲುಗಳನ್ನು ಗಳಿಸುವ ಮೂಲಕ ವಿಶ್ವಕಪ್‌ನಲ್ಲಿ ಅವರ ವಯಕ್ತಿಕ ಗೋಲುಗಳ ಸಂಖ್ಯೆಯು ೧೮ಕ್ಕೆ ಏರಿತು, ಇದಕ್ಕೂ ಮೊದಲು, ಅಮೆರಿಕದ ಟೆಕ್ಸಾಸ್‌ನಲ್ಲಿ ನಾರ್ವೆ ಐವರಿ ಕೋಸ್ಟ್ ಅನ್ನು ೨-೧ ಗೋಲುಗಳಿಂದ ಸೋಲಿಸಿ ೧೬ನೇ ಸುತ್ತಿಗೆ ಮುನ್ನಡೆಯಿತು. ನಾರ್ವೆ ಈಗ ಇದೇ ಭಾನುವಾರ ರಾತ್ರಿ ೧೬ನೇ ಸುತ್ತಿನಲ್ಲಿ ಬ್ರೆಜಿಲ್ ಅನ್ನು ಎದುರಿಸಲಿದೆ. ಇಂಗ್ಲೆಂಡ್, ಇಂದು ಡಿಆರ್ ಕಾಂಗೋ ವಿರುದ್ಧ ಸೆಣಸಲಿದೆ ಪಂದ್ಯವು ಭಾರತೀಯ ಕಾಲಮಾನ ರಾತ್ರಿ ೦೯:೩೦ ಕ್ಕೆ ಆರಂಭವಾಗಲಿದೆ.

**<>><<*><><<>**

ಇದೇ ೫ ರಿಂದ ೧೮ ರವರೆಗೆ ನಡೆಯಲಿರುವ ಬೆಲ್ಜಿಯಂ ಪ್ರವಾಸಕ್ಕಾಗಿ ಹಾಕಿ ಇಂಡಿಯಾ ೨೨ ಸದಸ್ಯರ ಭಾರತೀಯ ೨೧ ವರ್ಷದೊಳಗಿನವರ ಜೂನಿಯರ್ ಪುರುಷರ ಹಾಕಿ ತಂಡವನ್ನು ಪ್ರಕಟಿಸಿದೆ. ನೂತನವಾಗಿ ನೇಮಕಗೊಂಡ ಕೋಚ್ ಫ್ರೆಡೆರಿಕ್ ಸೋಯೆಜ್ ಅವರ ನೇತೃತ್ವದಲ್ಲಿ ಈ ಪ್ರವಾಸವು, ಈ ವರ್ಷದ ಕೊನೆಯಲ್ಲಿ ನಡೆಯಲಿರುವ ಎಫ್‌ಐಎಚ್ ಹಾಕಿ ಪುರುಷರ ಜೂನಿಯರ್ ಏಷ್ಯಾ ಕಪ್‌ಗೆ ಮುಂಚಿತವಾಗಿ ಪ್ರಮುಖ ಪೂರ್ವಸಿದ್ಧತಾ ಹಂತವಾಗಿ ಕಾರ್ಯನಿರ್ವಹಿಸುತ್ತದೆ.

**<>><< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>**

**<>><< ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ ><><<>**